# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೊಳಕಾಲ್ಮೂರು ಮತ್ತು ಸಾಗರ ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ಆರ್ಥಿಕ ವರ್ಷದ ಮಧ್ಯದಲ್ಲಿ ನಿವೃತ್ತರಾಗುವ ಹಾಗೂ ಕರ್ತವ್ಯ ನಿರತ ಸಿಬ್ಬಂದಿಯವರುಗಳ ವೇತನ ಪಾವತಿ ಸಂಬಂಧ ಅನುದಾನ ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 3 ಶಾಖೆಯ ಇ-ಆಫೀಸ್ ಕಡತಗಳ ಸಂಖ್ಯೆ: ಆಇ 169 ಮತ್ತು 176 ವೆಚ್ಚ 3/2020

**ಪ್ರಸ್ತಾವನೆ:**

ಶ್ರೀ ಎನ್.ಆರ್.ಶೇಖರ್ ಇವರು ಮೂಲತ: ಶಿಕ್ಷಣ ಇಲಾಖೆಯವರಾಗಿದ್ದು ಇವರು ಜೂನ್ 2019ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿಲೀನಗೊಂಡಿದ್ದು ಸದರಿಯವರು ಜೂನ್ 2019ರಿಂದ ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿಸ್ತರಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಇಲಾಖೆಯ ಸೇವೆಯಿಂದ ವಿಮುಕ್ತಿಗೊಂಡು ಪ್ರಸ್ತುತ ಇಲಾಖೆಯಲ್ಲಿ ಸೇವೆಯನ್ನು ಪರಿಗಣಿಸಿ ಮಹಾಲೇಖಪಾಲರು ಮಾರ್ಚ್ 2020ರಲ್ಲಿ ಪೇಸ್ಲಿಪ್ ಅನ್ನು ವಿತರಿಸಿರುವುದರಿಂದ ಲೆಕ್ಕ ಶೀರ್ಷಿಕೆ 2225-00-103-0-74-005ರಡಿ ಜೂನ್ 2019ರಿಂದ ಫೆಬ್ರವರಿ 2020ರವರೆಗಿನ ವೇತನ ವೆಚ್ಚಕ್ಕಾಗಿ ರೂ.6.08ಲಕ್ಷ ಮತ್ತು 2020-21ನೇ ಸಾಲಿಗೆ ವೇತನ ವೆಚ್ಚಕ್ಕಾಗಿ ರೂ.8.16ಲಕ್ಷ ಒಟ್ಟು ರೂ.14.24ಲಕ್ಷಗಳನ್ನು ವೇತನ ವೆಚ್ಚಕ್ಕಾಗಿ ಕೋರಿದ್ದು, ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಿಂದ ಬಿಡುಗಡೆಗೊಳಿಸಿ ಬಾಕಿ ವೇತನವನ್ನು ಸೆಳೆಯಲು ಅನುಮತಿಸಿದ ನಂತರ ಸೆಳೆಯುವಂತೆ ತಿಳಿಸಿ ಬಿಡುಗಡೆಗೊಳಿಸಲು ನಿರ್ಣಯಿಸಿ ಹಾಗೂ

ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಿಸ್ತರಣಾಧಿಕಾರಿಗಳ ವೇತನ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 2225-00-103-0-74-005ರಡಿ ರೂ.2.43ಲಕ್ಷಗಳನ್ನು ಒದಗಿಸಿದ್ದು ಇದುವರೆಗೆ ರೂ.1.66ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿರುವುದರಿಂದ, ಸದರಿ ಅಧಿಕಾರಿಗಳು ಮೇ 2020ರಲ್ಲಿ ವಯೋನಿವೃತ್ತಿ ಹೊಂದಿರುವುದರಿಂದ ಬಾಕಿ ವೇತನ ಹಾಗೂ ನಿವೃತ್ತಿ ಗಳಿಕೆ ರಜೆ ಪಾವತಿಗಾಗಿ ಬಿಡುಗಡೆಗೆ ಲಭ್ಯವಿರುವ ರೂ.0.77ಲಕ್ಷಗಳನ್ನು ಬಿಡುಗಡೆಗೊಳಿಸಲು ಪ್ರಸ್ತಾವಿಸಿದ್ದು, ಪ್ರಸ್ತಾವನೆಯಂತೆ ವಯೋ ನಿವೃತ್ತಿ ಹೊಂದುವ ಸಿಬ್ಬಂದಿಯವರ ವೇತನ ವೆಚ್ಚಕ್ಕಾಗಿ ಬಿಡುಗಡೆಗೊಳಿಸಲು ಪ್ರಸ್ತಾವಿಸಿದೆ. ಪ್ರಸ್ತಾವನೆಗಳನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 179 ವೆಚ್ಚ 6/2020 (ಇ-ಆಫೀಸ್) ದಿನಾಂಕ: 11ನೇ ಜೂನ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದನ್ವಯ 3ರ ಕಾಲಂ ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 4ರ ಕಾರ್ಯಕ್ರಮ ಹಾಗೂ ಆಬ್ಜೆಕ್ಟ್ ಹೆಡ್ ಗಳಡಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರುಗಳ ಮತ್ತು ಮೇ 2020ರ ಅಂತ್ಯಕ್ಕೆ ನಿವೃತ್ತರಾಗಲಿರುವುದರಿಂದ 2020-21ನೇ ಸಾಲಿನಲ್ಲಿ ಒದಗಿಸಿರುವ ಅನುದಾನವನ್ನು ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಷರತ್ತನ್ನು ಸಡಿಲಿಸಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 5ರ ಲೆಕ್ಕ ಶೀರ್ಷಿಕೆಗಳಡಿ ಒಟ್ಟು ರೂ.15.01ಲಕ್ಷ (ರೂಪಾಯಿ ಹದಿನೈದು ಲಕ್ಷದ ಒಂದು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

| ಕ್ರ.ಸಂ. | ಜಿಲ್ಲೆ | ತಾಲ್ಲೂಕು ಪಂಚಾಯತಿ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|---|---|
| 1 | ಚಿತ್ರದುರ್ಗ | ಮೊಳಕಾಲ್ಮೂರು | 2225-00-103-0-74-005 | 2515-00-197-1-10-300 | 14.24 |
| 2 | ಶಿವಮೊಗ್ಗ | ಸಾಗರ | 2225-00-103-0-74-005 | 2225-03-197-1-01-405 | 0.77 |
| | | | ಒಟ್ಟು | | 15.01 |

1414545951
1414581169.

ಮುಂದುವರೆದಿದೆ. . . . .

*(ಸೂಚನೆ: ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು. ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು).*

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

**(ಪುರುಷೋತ್ತಮ್ ಸಿಂಗ್ ಬಿ.ಹೆಚ್.)**
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ/ಶಿವಮೊಗ್ಗ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಮೊಳಕಾಲ್ಮೂರು/ಸಾಗರ
7. ಜಿಲ್ಲಾ/ಉಪ ಖಜಾನಾಧಿಕಾರಿಗಳು, ಮೊಳಕಾಲ್ಮೂರು/ಸಾಗರ
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ